**All India Radio: Bangalore**
**National Bulletin In Kannada**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**21.05.2026 19.35 hrs**

---

ಮುಖ್ಯಾಂಶಗಳು

- ಜಾಗತಿಕ ಬಿಕ್ಕಟ್ಟಿನ ನಡುವೆಯೂ ಭಾರತದ ಜಿಡಿಪಿ ಬೆಳವಣಿಗೆ ದರ ಶೇಕಡ. ೬.೫ಕ್ಕೆ ಏರಿಕೆ: ಕೇಂದ್ರ ಸಚಿವ ಪಿಯೂಷ್ ಗೋಯಲ್
- ಸೈಪ್ರಸ್ ಭಾರತೀಯ ಉದ್ಯಮಗಳಿಗೆ ವಿಶ್ವಾಸಾರ್ಹ ವೇದಿಕೆಯಾಗಿ ಕಾರ್ಯನಿರ್ವಹಿಸಲು ಸಿದ್ಧ: ಸೈಪ್ರಸ್ ಅಧ್ಯಕ್ಷ ಕ್ರಿಸ್ಟೋಡೌಲಿಡಸ್
- ಕೃಷಿ ಉತ್ಪಾದನೆಯಲ್ಲಿ ಜಗತ್ತಿಗೆ ನವ ಮಾದರಿ ಪ್ರಸ್ತುತಪಡಿಸಿದ ಭಾರತ: ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್
- ಐಪಿಎಲ್ ಟಿ-೨೦ ಕ್ರಿಕೆಟ್: ಗುಜರಾತ್ ಟೈಟಾನ್ಸ್ ವಿರುದ್ಧ ಟಾಸ್ ಗೆದ್ದು ಫೀಲ್ಡಿಂಗ್ ಆಯ್ದುಕೊಂಡ ಚೆನ್ನೈ ಸೂಪರ್ ಕಿಂಗ್ಸ್

---

ಜಾಗತಿಕ ಬಿಕ್ಕಟ್ಟಿನ ನಡುವೆಯೂ ಭಾರತದ ಜಿಡಿಪಿ ಶೇ. ೬.೪ ರಿಂದ ಶೇ. ೬.೫ ಕ್ಕೆ ಏರಿಕೆಯಾಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಇಂದು ತಿಳಿಸಿದ್ದಾರೆ. ಇದು ೧.೪ ಶತಕೋಟಿ ಭಾರತೀಯರ ಸಾಮರ್ಥ್ಯವನ್ನು ಪ್ರದರ್ಶಿಸುತ್ತದೆ ಎಂದು ಅವರು ಅಭಿಪ್ರಾಯ ಪಟ್ಟಿದ್ದಾರೆ.

ನವದೆಹಲಿಯಲ್ಲಿ ನಡೆದ ಅಮೇರಿಕ ಚೇಂಬರ್ ಆಫ್ ಕಾಮರ್ಸ್‌ನ ವಾರ್ಷಿಕ ನಾಯಕತ್ವ ಶೃಂಗಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು. ಭಾರತವು ವಿಶ್ವದೊಂದಿಗೆ ಆತ್ಮವಿಶ್ವಾಸದಿಂದ ತೊಡಗಿಸಿಕೊಳ್ಳುವ ಸಾಮರ್ಥ್ಯ ಹೆಚ್ಚುತ್ತಿರುವುದನ್ನು ಈ ಸಾಧನೆಯು ಪ್ರತಿಬಿಂಬಿಸುತ್ತದೆ ಎಂದು ಅವರು ಹೇಳಿದರು.

ಚಾಲ್ತಿ ಖಾತೆ ಕೊರತೆಯ ಕುರಿತು ಮಾತನಾಡಿದ ಸಚಿವರು, ಸರ್ಕಾರವು ಈ ನಿಟ್ಟಿನಲ್ಲಿ ವಿವಿಧ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ ಮತ್ತು ಎಲ್ಲಾ ಸರ್ಕಾರಿ ಇಲಾಖೆಗಳು ಪರಿಸ್ಥಿತಿಯನ್ನು ನಿಭಾಯಿಸಲು ಸಮನ್ವಯದಿಂದ ಕಾರ್ಯನಿರ್ವಹಿಸುತ್ತಿವೆ ಎಂದು ಹೇಳಿದರು.

---

ಯುರೋಪ್, ಪೂರ್ವ ಮೆಡಿಟರೇನಿಯನ್, ಗಲ್ಫ್ ಮತ್ತು ಉತ್ತರ ಆಫ್ರಿಕಾದ ಮಾರುಕಟ್ಟೆಗಳಿಗೆ ಪ್ರವೇಶ ಬಯಸುವ ಭಾರತೀಯ ಉದ್ಯಮಗಳಿಗೆ ವಿಶ್ವಾಸಾರ್ಹ ಮತ್ತು ಸ್ಪರ್ಧಾತ್ಮಕ ಲಾಂಚ್ ವೇದಿಕೆ ಆಗಿ ಕಾರ್ಯನಿರ್ವಹಿಸಲು ಸೈಪ್ರಸ್ ಸಿದ್ಧವಾಗಿದೆ ಎಂದು ಸೈಪ್ರಸ್ ಅಧ್ಯಕ್ಷ ನಿಕೋಸ್ ಕ್ರಿಸ್ಟೋಡೌಲಿಡಸ್ ಇಂದು ಹೇಳಿದ್ದಾರೆ.

ಮುಂಬೈನಲ್ಲಿ ನಡೆದ ಭಾರತ-ಸೈಪ್ರಸ್ ವ್ಯಾಪಾರ ವೇದಿಕೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಇದೇ ವರ್ಷ ಸೆಪ್ಟೆಂಬರ್ ೧ ರಿಂದ ಮುಂಬೈನಲ್ಲಿ 'ಸೈಪ್ರಸ್ ವ್ಯಾಪಾರ ಕೇಂದ್ರ' ಕಾರ್ಯಾರಂಭ ಮಾಡಲಿದೆ ಎಂದು ಘೋಷಿಸಿದರು. ಇಂತಹ ಪಾಲುದಾರಿಕೆಯು ಭಾರತ ಮತ್ತು ಯುರೋಪಿಯನ್ ಒಕ್ಕೂಟದ ನಡುವಿನ ಆರ್ಥಿಕ ಬಾಂಧವ್ಯವನ್ನು ಬಲಪಡಿಸುತ್ತದೆ ಎಂದು ಅವರು ಹೇಳಿದರು.

ಹೂಡಿಕೆ, ವ್ಯಾಪಾರ ಮತ್ತು ಜಂಟಿ ವ್ಯಾಪಾರ ಅವಕಾಶಗಳ ಮೂಲಕ ಬಲವಾದ ರಾಜಕೀಯ ಸಂಬಂಧಗಳನ್ನು ಆಳವಾದ ಆರ್ಥಿಕ ಸಹಕಾರವಾಗಿ ಪರಿವರ್ತಿಸುವ ಅಗತ್ಯವನ್ನು ಮತ್ತು ಉಭಯ ದೇಶಗಳ ನಡುವಿನ ಆರ್ಥಿಕ ತೊಡಗಿಸಿಕೊಳ್ಳುವಿಕೆಯನ್ನು ಹೆಚ್ಚಿಸುವಲ್ಲಿ ಖಾಸಗಿ ವಲಯದ ಪಾತ್ರವನ್ನು ಅವರು ಇದೇ ವೇಳೆ ಎತ್ತಿ ತೋರಿಸಿದರು.

ಇದೇ ಕಾರ್ಯಕ್ರಮದಲ್ಲಿ ವ್ಯಾಪಾರ, ರಕ್ಷಣಾ ಉತ್ಪಾದನೆ ಮತ್ತು ತಂತ್ರಜ್ಞಾನ ಸಹಕಾರ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಉಭಯ ದೇಶಗಳ ಪ್ರಮುಖ ಉದ್ಯಮ ಸಂಸ್ಥೆಗಳು ಮತ್ತು ಕಂಪನಿಗಳ ನಡುವೆ ಆರು ತಿಳಿವಳಿಕಾ ಒಪ್ಪಂದಗಳನ್ನು ವಿನಿಮಯ ಮಾಡಿಕೊಳ್ಳಲಾಯಿತು.

---

ಜಗತ್ತು ಇಂದು ಭಾರತವನ್ನು ವಿಶ್ವಾಸಾರ್ಹ ಪಾಲುದಾರನಾಗಿ ನೋಡುತ್ತಿದೆ ಎಂದು ಕೇಂದ್ರ ಸಚಿವ ಪಿಯೂಷ್ ಗೋಯಲ್ ಹರ್ಷ ವ್ಯಕ್ತಪಡಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿಯವರ ಐದು ರಾಷ್ಟ್ರಗಳ ಭೇಟಿಯ ಕುರಿತು ನವದೆಹಲಿಯಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಈ ಭೇಟಿಯು ಸಮಾಜದ ಪ್ರತಿಯೊಂದು ವರ್ಗಕ್ಕೂ ಅನುಕೂಲಗಳನ್ನು ಖಾತರಿಪಡಿಸುತ್ತದೆ ಎಂದು ಹೇಳಿದರು.

ಪ್ರಧಾನ ಮಂತ್ರಿಯವರ ಭೇಟಿಯು ಜಾಗತಿಕ ವೇದಿಕೆಯಲ್ಲಿ ಭಾರತದ ಬಲವಾದ ಸ್ಥಾನವನ್ನು ಪ್ರತಿಬಿಂಬಿಸುತ್ತದೆ. ಪ್ರವಾಸದ ಸಮಯದಲ್ಲಿ ಭಾರತದಲ್ಲಿ ೭೫ ರಿಂದ ೧೦೦ ಬಿಲಿಯನ್ ಡಾಲರ್ ಹೂಡಿಕೆ ಮಾಡುವ ಯುಎಇಯ ಬದ್ಧತೆ ಸೇರಿದಂತೆ ೫೭ ಮಹತ್ವದ ಒಪ್ಪಂದಗಳಿಗೆ ಈ ಸಂದರ್ಭದಲ್ಲಿ ಸಹಿ ಹಾಕಲಾಗಿದೆ ಎಂದು ಅವರು ಹೇಳಿದರು.

---

ಭಾರತವು ಕೃಷಿ ಉತ್ಪಾದನೆಯನ್ನು ಹೆಚ್ಚಿಸುವ, ಆಹಾರ ಭದ್ರತೆಯನ್ನು ಬಲಪಡಿಸುವ ಮತ್ತು ಲಕ್ಷಾಂತರ ರೈತರ ಜೀವನದಲ್ಲಿ ಸಕಾರಾತ್ಮಕ ಬದಲಾವಣೆಗಳನ್ನು ತರುವ ಮೂಲಕ ಜಗತ್ತಿಗೆ ಹೊಸ ಮಾದರಿಯನ್ನು ಪ್ರಸ್ತುತಪಡಿಸಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ.

ರೋಮ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಆಹಾರ ಮತ್ತು ಕೃಷಿ ಸಂಸ್ಥೆ- ಎಫ್‌ಎಒ, ಅಗ್ರಿಕೋಲಾ ಪದಕವನ್ನು ನೀಡಲಾಗುತ್ತಿರುವುದಕ್ಕೆ ಸಂತೋಷ ವ್ಯಕ್ತಪಡಿಸಿದ ಸಚಿವರು, ಈ ಗೌರವವು ನವ ಭಾರತದ ಬೆಳೆಯುತ್ತಿರುವ ಪ್ರತಿಷ್ಠೆಯ ಸಂಕೇತವಾಗಿದೆ ಎಂದು ಅಭಿಪ್ರಾಯಪಟ್ಟರು.

ಕೋವಿಡ್ ಸಾಂಕ್ರಾಮಿಕ ರೋಗದ ನಂತರ ಸರ್ಕಾರವು ಸುಮಾರು ೮೦ ಕೋಟಿ ಜನರಿಗೆ ವಿಶ್ವದ ಅತಿದೊಡ್ಡ ಆಹಾರ ಭದ್ರತೆಯನ್ನು ಒದಗಿಸಿದೆ. ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯ ಮೂಲಕ ಲಕ್ಷಾಂತರ ರೈತರನ್ನು ಸರ್ಕಾರ ಬೆಂಬಲಿಸುತ್ತಿದೆ ಎಂದು ಸಚಿವರು ಒತ್ತಿ ಹೇಳಿದರು.

---

'ಶಾಲಾ ನಿರ್ವಹಣಾ ಸಮಿತಿ ಮಾರ್ಗಸೂಚಿಗಳು ೨೦೨೪' ಖಾಸಗಿ ಅನುದಾನರಹಿತ ಶಾಲೆಗಳಿಗೆ ಅನ್ವಯಿಸುವುದಿಲ್ಲ ಎಂದು ಶಿಕ್ಷಣ ಸಚಿವಾಲಯ ಸ್ಪಷ್ಟಪಡಿಸಿದೆ. ಏಕೆಂದರೆ ಇಂತಹ ಸಂಸ್ಥೆಗಳು ತಮ್ಮ ವೆಚ್ಚಗಳನ್ನು ಭರಿಸಲು ಸರ್ಕಾರದಿಂದ ಅಥವಾ ಸ್ಥಳೀಯ ಪ್ರಾಧಿಕಾರದಿಂದ ಯಾವುದೇ ಅನುದಾನವನ್ನು ಪಡೆಯುವುದಿಲ್ಲ ಎಂದು ತಿಳಿಸಿದೆ.

ಸಾಮಾಜಿಕ ಮಾಧ್ಯಮ ಪೋಸ್ಟ್ ಒಂದರಲ್ಲಿ ಈ ಬಗ್ಗೆ ಮಾಹಿತಿ ನೀಡಿರುವ ಸಚಿವಾಲಯ, ಶಿಕ್ಷಣ ಎಂಬುದು ಸರ್ಕಾರ, ಶಾಲೆಗಳು, ಪೋಷಕರು ಮತ್ತು ಸಮುದಾಯದ ಜಂಟಿ ಜವಾಬ್ದಾರಿಯಾಗಿದೆ ಎಂದು ಹೇಳಿದೆ. ಪೋಷಕರು, ಶಾಲೆಗಳು ಮತ್ತು ಇತರ ಪಾಲುದಾರರ ನಡುವಿನ ಸಹಯೋಗವನ್ನು ಬಲಪಡಿಸುವುದು ಶಾಲೆಗಳ ಒಟ್ಟಾರೆ ಕಾರ್ಯನಿರ್ವಹಣೆಯನ್ನು ಸುಧಾರಿಸಲು ಮತ್ತು ಮಕ್ಕಳಲ್ಲಿ ಉತ್ತಮ ಕಲಿಕೆಯ ಫಲಿತಾಂಶಗಳನ್ನು ಖಚಿತಪಡಿಸಿಕೊಳ್ಳಲು ಅತ್ಯಗತ್ಯ ಎಂದು ಸಚಿವಾಲಯ ತಿಳಿಸಿದೆ.

---

ಪಶ್ಚಿಮ ಏಷ್ಯಾದಲ್ಲಿ ಸಂಘರ್ಷ ಆರಂಭಗೊಂಡು ಲಂಕ್ಕೂ ಹೆಚ್ಚು ದಿನಗಳಾಗಿದ್ದು, ದೇಶದ ಸಾಮಾನ್ಯ ನಾಗರಿಕರಿಗೆ ತೈಲ ಸಂಬಂಧಿತ ತೊಂದರೆಗಳನ್ನು ಅತಿ ಕನಿಷ್ಠ ಮಟ್ಟಕ್ಕೆ ಇಳಿಸಲು ಸರ್ಕಾರ ಸಕಲ ಕ್ರಮ ಕೈಗೊಂಡಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ತಿಳಿಸಿದೆ.

ದೆಹಲಿಯಲ್ಲಿಂದು ಅಂತರ ಸಚಿವಾಲಯ ಸುದ್ದಿಗೋಷ್ಠಿಯಲ್ಲಿ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ, ದೇಶದಲ್ಲಿ ಕಚ್ಚಾತೈಲ, ಪೆಟ್ರೋಲ್, ಡೀಸೆಲ್ ಮತ್ತು ನೈಸರ್ಗಿಕ ಅನಿಲ ಸಮರ್ಪಕ ಪ್ರಮಾಣದಲ್ಲಿದ್ದು, ಯಾವುದೇ ಕೊರತೆ ಇಲ್ಲ ಎಂದು ಹೇಳಿದರು.

ತೈಲಗಾರಗಳಲ್ಲಿ ಎಲ್‌ಪಿಜಿ ಉತ್ಪಾದನೆ ಹೆಚ್ಚಿಸಲಾಗಿದ್ದು, ದೇಶಾದ್ಯಂತ ಬೇಡಿಕೆ ಅನುಸಾರ ಇಂಧನ ಪೂರೈಕೆ ಮಾಡಲಾಗುತ್ತಿದೆ. ಗೃಹ ಬಳಕೆ ಅಡುಗೆ ಅನಿಲ ಬೇಡಿಕೆಯ ಶೇಕಡ ೯೬ರಷ್ಟನ್ನು ಪೂರೈಕೆ ಮಾಡಲಾಗಿದೆ. ಕಳೆದ ಮೂರು ದಿನಗಳಲ್ಲಿ ೨೩ ಸಾವಿರದ ೫೮೮ ಟನ್ ವಾಣಿಜ್ಯ ಸಿಲಿಂಡರ್ ಮತ್ತು ೯೬೮ ಟನ್ ಇಂಧನ ಮಾರಾಟ ಮಾಡಲಾಗಿದೆ ಎಂದು ತಿಳಿಸಿದರು.

ತೈಲ ಲಭ್ಯತೆ ಬಗ್ಗೆ ಯಾವುದೇ ವದಂತಿ ಅಥವಾ ತಪ್ಪು ವರದಿಗಳನ್ನು ನಾಗರಿಕರು ಸ್ವೀಕರಿಸಬಾರದು ಹಾಗೂ ವಿಚಲಿತರಾಗಬಾರದು ಎಂದು ಅವರು ಮನವಿ ಮಾಡಿದ್ದು, ಅವಶ್ಯಕತೆ ಅನುಸಾರ ಮಾತ್ರ ಸಿಲಿಂಡರ್ ಬುಕ್ಕಿಂಗ್ ಮಾಡುವಂತೆ ಹಾಗೂ ಸಾಧ್ಯವಾದಷ್ಟು ಮಿತವ್ಯಯ ಮಾಡುವಂತೆ ಅವರು ಕೋರಿದ್ದಾರೆ.

---

ಆಫ್ರಿಕಾದ ಕೆಲವು ಭಾಗಗಳಲ್ಲಿ ಆರೋಗ್ಯ ಪರಿಸ್ಥಿತಿ ಬದಲಾಗುತ್ತಿರುವ ಹಿನ್ನೆಲೆಯಲ್ಲಿ ನವದೆಹಲಿಯಲ್ಲಿ ಇದೇ ೨೮ ರಿಂದ ೩೧ ರವರೆಗೆ ನಡೆಯಬೇಕಿದ್ದ ನಾಲ್ಕನೇ ಭಾರತ-ಆಫ್ರಿಕಾ ವೇದಿಕೆ ಶೃಂಗಸಭೆಯನ್ನು ಮುಂದೂಡಲಾಗಿದೆ.

ಭಾರತ, ಆಫ್ರಿಕನ್ ಒಕ್ಕೂಟದ ಅಧ್ಯಕ್ಷರು ಮತ್ತು ಆಫ್ರಿಕನ್ ಒಕ್ಕೂಟದ ಕಮಿಷನ್ ನಡುವೆ ಸಮಾಲೋಚನೆಗಳನ್ನು ನಡೆಸಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

ಈ ಸಮಾಲೋಚನೆಗಳ ನಂತರ, ನಾಲ್ಕನೇ ಭಾರತ-ಆಫ್ರಿಕಾ ವೇದಿಕೆ ಶೃಂಗಸಭೆಯನ್ನು ಮುಂದಿನ ದಿನಾಂಕದಂದು ಆಯೋಜಿಸುವುದು ಸೂಕ್ತ ಎಂಬ ನಿರ್ಧಾರಕ್ಕೆ ಬರಲಾಯಿತು. ಶೃಂಗಸಭೆ ಮತ್ತು ಅದಕ್ಕೆ ಸಂಬಂಧಿಸಿದ ಸಭೆಗಳ ಹೊಸ ದಿನಾಂಕಗಳನ್ನು ಪರಸ್ಪರ ಸಮಾಲೋಚನೆಗಳ ಮೂಲಕ ಅಂತಿಮಗೊಳಿಸಲಾಗುವುದು ಎಂದು ಸಚಿವಾಲಯ ತಿಳಿಸಿದೆ.

---

'ಕೈಲಾಸ ಮಾನಸ ಸರೋವರ ಯಾತ್ರೆ ೨೦೨೬'ರ ಯಾತ್ರಿಕರ ಆಯ್ಕೆಗಾಗಿ ಗಣಕೀಕೃತ ಡ್ರಾವನ್ನು ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ನಡೆಸಿದರು.

೨೦೨೬ರ ಈ ವರ್ಷದ ಯಾತ್ರೆಯು ಜೂನ್‌ನಲ್ಲಿ ಪ್ರಾರಂಭವಾಗಿ ಆಗಸ್ಟ್‌ನಲ್ಲಿ ಮುಕ್ತಾಯಗೊಳ್ಳಲಿದೆ. ಮುಕ್ತ, ಕಂಪ್ಯೂಟರ್ ಆಧಾರಿತ ಮತ್ತು ಲಿಂಗ-ಸಮಾನತೆಯ ಸಮತೋಲನವನ್ನು ಒಳಗೊಂಡ ಆಯ್ಕೆ ಪ್ರಕ್ರಿಯೆಯ ಮೂಲಕ ಒಟ್ಟು ಒಂದು ಸಾವಿರ ಯಾತ್ರಿಕರನ್ನು ಆಯ್ಕೆ ಮಾಡಲಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಪ್ರಕಟಣೆಯಲ್ಲಿ ತಿಳಿಸಿದೆ.

ಆಯ್ಕೆಯಾದ ಯಾತ್ರಿಕರು ಲಿಪುಲೇಖ್ ಮತ್ತು ನಾಥೂ ಲಾ ಪಾಸ್‌ಗಳ ಮೂಲಕ ತಲಾ ೫೦ ಯಾತ್ರಿಕರನ್ನು ಒಳಗೊಂಡ ೧೦ ಬ್ಯಾಚ್‌ಗಳಲ್ಲಿ ಪ್ರಯಾಣಿಸಲಿದ್ದಾರೆ. ಈ ಎರಡೂ ಮಾರ್ಗಗಳು ಈಗ ಸಂಪೂರ್ಣವಾಗಿ ವಾಹನ ಸಂಚಾರಕ್ಕೆ ಯೋಗ್ಯವಾಗಿದ್ದು, ಅತ್ಯಂತ ಕಡಿಮೆ ನಡಿಗೆಯನ್ನು ಒಳಗೊಂಡಿವೆ. ಮಾರ್ಗ ಮತ್ತು ಬ್ಯಾಚ್‌ಗಳ ವಿವರಗಳು ಯಾತ್ರೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಲಭ್ಯವಿವೆ.

ಆಯ್ಕೆಯಾಗಿರುವ ಕುರಿತಾದ ಅಧಿಸೂಚನೆಗಳನ್ನು ಶಾರ್ಟ್‌ಲಿಸ್ಟ್ ಮಾಡಲಾದ ಯಾತ್ರಿಕರಿಗೆ ಎಸ್‌ಎಂಎಸ್ ಮತ್ತು ಇಮೇಲ್ ಮೂಲಕ ಕಳುಹಿಸಲಾಗಿದೆ. ಯಾತ್ರಿಕರು ತಮ್ಮ ಆಯ್ಕೆಯ ಸ್ಥಿತಿಯನ್ನು ಪರಿಶೀಲಿಸಲು ಯಾತ್ರೆಯ ವೆಬ್‌ಸೈಟ್‌ಗೆ ಲಾಗ್ ಇನ್ ಆಗಬಹುದು. ಅಥವಾ ಅವರು ಈ ಸಹಾಯವಾಣಿ ಸಂಖ್ಯೆ ೦೧೧-೨೩೦೮೮೨೧೪ ಕರೆ ಮಾಡಬಹುದು

---

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್, ಚೆನ್ನೈ ಸೂಪರ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿದೆ.

ಟಾಸ್ ಗೆದ್ದ ಚೆನ್ನೈ ಸೂಪರ್ ಕಿಂಗ್ಸ್ ತಂಡ ಫೀಲ್ಡಿಂಗ್ ಆಯ್ಕೆಮಾಡಿಕೊಂಡಿದೆ.

---

ನವದೆಹಲಿಯಲ್ಲಿ ಇಂದು ನಡೆದ ಸಮಾರಂಭವೊಂದರಲ್ಲಿ ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್, ಅನುವಂಶಿಕ ಅಸ್ವಸ್ಥತೆಗಳ ನಿರ್ವಹಣೆಯ ವಿಶಿಷ್ಟ ವಿಧಾನಗಳ ನೆಟ್‌ವರ್ಕ್ 'ಉಮ್ಮೀದ್' ಅನ್ನು ದೇಶಕ್ಕೆ ಸಮರ್ಪಿಸಿದರು. ಇದು ಅನುವಂಶಿಕ ಜೀನ್ ಅಸ್ವಸ್ಥತೆಗಳನ್ನು ಎದುರಿಸಲು ಜೈವಿಕ ತಂತ್ರಜ್ಞಾನ ಇಲಾಖೆಯ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿರುವ ಒಂದು ರಾಷ್ಟ್ರೀಯ ಉಪಕ್ರಮವಾಗಿದೆ.

ಅನುವಂಶಿಕ ಜೀನ್ ಅಸ್ವಸ್ಥತೆಗಳನ್ನು ರೋಗನಿರ್ಣಯ, ಆಪ್ತಸಮಾಲೋಚನೆ, ತಡೆಗಟ್ಟುವಿಕೆ, ತರಬೇತಿ ಮತ್ತು ಸಾರ್ವಜನಿಕ ಆರೋಗ್ಯ ಜಾಗೃತಿಯನ್ನು ಒಳಗೊಂಡ ಒಂದು ಸಮಗ್ರ ವಿಧಾನದ ಮೂಲಕ ಪರಿಹರಿಸಲು ಭಾರತ ಕೈಗೊಂಡ ಮೊದಲ ರಾಷ್ಟ್ರೀಯ ಪ್ರಯತ್ನವನ್ನು ಈ ಉಪಕ್ರಮ ಪ್ರತಿನಿಧಿಸುತ್ತದೆ.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ದೇಶದ ಜನರಿಗೆ ಕೈಗೆಟುಕುವ ದರದಲ್ಲಿ ಮತ್ತು ಸುಲಭವಾಗಿ ಆರೋಗ್ಯ ಸೇವೆಯನ್ನು ಒದಗಿಸುವುದು  ಸರ್ಕಾರದ ಆದ್ಯತೆಯಾಗಿದೆ. 'ಉಮ್ಮೀದ್' ಯೋಜನೆಯು ಜನರಲ್ಲಿ ಹೊಸ ಭರವಸೆಯನ್ನು ಮೂಡಿಸಿದೆ ಮತ್ತು ಇದರ ಚೌಕಟ್ಟಿನಡಿಯಲ್ಲಿ ಜೀನ್ ರೋಗನಿರ್ಣಯ, ಪ್ರಸವಪೂರ್ವ ತಪಾಸಣೆ, ಜೀನ್ ಆಪ್ತಸಮಾಲೋಚನೆ ಮತ್ತು ವೈದ್ಯರ ಸಾಮರ್ಥ್ಯ ವೃದ್ಧಿಯನ್ನು ಒಳಗೊಳ್ಳಲಾಗಿದೆ ಎಂದು ತಿಳಿಸಿದರು.

---

ಹೂಡಿಕೆದಾರರಿಂದ ಒಟ್ಟಾರೆ ೪೯ ಕೋಟಿ ರೂಪಾಯಿ ವಂಚನೆ ಮಾಡಿರುವ ಆರೋಪಕ್ಕೆ ಸಂಬಂಧಿಸಿದಂತೆ ಏಳು ರಾಜ್ಯಗಳಲ್ಲಿ ಬಾಕಿ ಇರುವ ೫೩ ಎಫ್‌ಐಆರ್‌ಗಳನ್ನು ಒಂದೇ ಕಡೆ ಸೇರಿಸುವಂತೆ ಕೋರಿ ಸಲ್ಲಿಕೆಯಾಗಿದ್ದ ಅರ್ಜಿಯನ್ನು ವಿಚಾರಣೆಗೆ ಸ್ವೀಕರಿಸಲು ಸುಪ್ರೀಂ ಕೋರ್ಟ್ ಇಂದು ನಿರಾಕರಿಸಿದೆ.

________ ಮುಕ್ತಾಯ _________